ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
**PAPER CLIPPINGS**

ಶಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಮಂಡಲ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ    ದಿನಾಂಕ : DATE : 03/03/2020

# ಚಂದನದಲ್ಲಿ ಸ್ಪೀಕರ್ ಭಜನೆ

**ಬೆಂಗಳೂರು:** ವಿಧಾನಮಂಡಲ ಕಲಾಪ ವರದಿ ಮಾಡುವ ಚಂದನ ವಾಹಿನಿಯಲ್ಲಿ ಪ್ರತಿಪಕ್ಷ ಸದಸ್ಯರ ಮುಖಗಳನ್ನು ಮರೆ ಮಾಚಿ ಕೇವಲ ಸ್ಪೀಕರ್ ಮುಖಾರವಿಂದ ತೋರಿಸಿ ಭಜನೆ ಮಾಡಲಾಗುತ್ತಿದೆ ಎಂದು ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ನಿರ್ಬಂಧ ಹೇರಿದ ಕಾಗೇರಿ ವಿರುದ್ಧ ಸಿದ್ದು ವಾಗ್ದಾಳಿ

''ವಿಧಾನ ಮಂಡಲ ಪ್ರತ್ಯಕ್ಷ ವರದಿ ಮಾಡದಂತೆ ಟಿ.ವಿ.ಚಾನೆಲ್‌ಗಳಿಗೆ ನಿರ್ಬಂಧ ವಿಧಿಸಿ, ಸರಕಾರಿ ಋಣದಲ್ಲಿರುವ ಚಂದನಕ್ಕೆ ಮಾತ್ರ ಅವಕಾಶ ನೀಡಲಾಗಿದೆ. ಬಿಜೆಪಿ ಅಭಿವ್ಯಕ್ತಿ ಸ್ವಾತಂತ್ರ್ಯದ ವಿರೋಧಿ ಎನ್ನುವುದಕ್ಕೆ ಇದು ಸಾಕ್ಷಿ'' ಎಂದು ಕಿಡಿ ಕಾರಿದ್ದಾರೆ.

ಈ ಸಂಬಂಧ ಸರಣಿ ಟ್ವೀಟ್ ಮಾಡಿರುವ ಸಿದ್ದರಾಮಯ್ಯ ''ಸದನದೊಳಗೆ ತಮ್ಮ ಸದಸ್ಯರು ನೀಲಿಚಿತ್ರ ನೋಡುತ್ತಾರೆ ಎಂಬ ಭಯ ಬಿಜೆಪಿಗೆ ಇದ್ದರೆ, ಅವರಿಗೆ ಬುದ್ಧಿಹೇಳಬೇಕೇ ಹೊರತು, ಟಿ.ವಿ.ಚಾನೆಲ್ ಕ್ಯಾಮೆರಾ ನಿರ್ಬಂಧಿಸುವುದಲ್ಲ.'' ಎಂದು ಲೇವಡಿ ಮಾಡಿದ್ದಾರೆ.

ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ ವಿರುದ್ಧ ಕಿಡಿ ಕಾರಿರುವ ಅವರು, ''ಟಿ.ವಿ.ಚಾನೆಲ್‌ಗಳಿಗೆ ಏಕಪಕ್ಷೀಯವಾಗಿ ನಿರ್ಬಂಧ ಹೇರಿರುವ ಸ್ಪೀಕರ್ ಕ್ರಮ ಮಾಧ್ಯಮ ವಿರೋಧಿ ನಡವಳಿಕೆ. ಸ್ಪೀಕರ್ ತೀರ್ಮಾನದ ವಿರುದ್ಧ ಮಾಧ್ಯಮ ಮಿತ್ರರ ಹೋರಾಟಕ್ಕೆ ಕಾಂಗ್ರೆಸ್‌ನ ಸಂಪೂರ್ಣ ಬೆಂಬಲ ಇದೆ'' ಎಂದು ಸಿದ್ದರಾಮಯ್ಯ ಹೇಳಿದ್ದಾರೆ.